*ಇ) ಈ ಕಟ್ಟಡದ ದುರಸ್ಥಿಗೆ ತಗುಲುತ್ತಿರುವ ಹಣವೆಷ್ಟು?*

*ಈ) ಇಲ್ಲಿ ಬೇರೆ ಕಟ್ಟಡ ಕಟ್ಟಿಸುವ ಆಲೋಚನೆ ಸರ್ಕಾರಕ್ಕೆ ಇದೆಯೇ?*

*ಉ) ಹಾಗಿದ್ದಲ್ಲಿ, ಈ ಯೋಜನೆಗಾಗಿ ತಗಲುವ ಹಣವೆಷ್ಟು?*

*ಊ) ಈ ಕೆಲಸವನ್ನು ಯಾವಾಗ ಪ್ರಾರಂಭಿಸಲಾಗುವುದು?*

ಶ್ರೀ ಎಂ. ರಾಜಶೇಖರ ಮೂರ್ತಿ (ಕಂದಾಯ ಸಚಿವರು):

ಅ) ಕಟ್ಟಡವು ಹಳೆಯದಾಗಿದ್ದು, ಬೀಳುವ ಸ್ಥಿತಿಯಲ್ಲಿದ್ದು ಉಪಯೋಗಿಸಲು ಯೋಗ್ಯವಿಲ್ಲದಿರುವ ಕಾರಣ.

ಆ) ಮಾಹಿಯಾನ ರೂ. 2,089-00 .

ಇ) ದುರಸ್ಥಿ ಮಾಡಲು ಅಸಾಧ್ಯ.

ಈ) ಹೌದು.

ಉ) ಲೋಕೋಪಯೋಗಿ ಇಲಾಖೆಯಿಂದ ನಕ್ಷೆ ಮತ್ತು ಅಂದಾಜು ಪಟ್ಟಿಗಳನ್ನು ಕರೆಯಲಾಗಿದೆ.

ಊ) ನಕ್ಷೆ ಮತ್ತು ಅಂದಾಜು ಪಟ್ಟಿಗಳನ್ನು ಅನುಮೋದಿಸಿದ ನಂತರ.

**ಕಾರಂಜಿ ಆಂಜನೇಯ ಸ್ವಾಮಿ ದೇವಸ್ಥಾನಕ್ಕೆ ಸೇರಿದ ಜಮೀನನ್ನು ಬಿ.ಎಂ.ಎಸ್. ಮಹಿಳಾ ಕಾಲೇಜಿಗೆ ಗುತ್ತಿಗೆ.**

992- ಶ್ರೀ ಸೋಮಪ್ಪ ಸುವರ್ಣ (ಮೂಡಬಿದರೆ): ಮಾನ್ಯ ಕಂದಾಯ ಸಚಿವರು ದಯವಿಟ್ಟು ಈ ವಿಷಯಗಳನ್ನು ತಿಳಿಸುವರೆ?

*ಅ) ಶ್ರೀ ಕಾರಂಜಿ ಆಂಜನೇಯ ಸ್ವಾಮಿ ದೇವಸ್ಥಾನಕ್ಕೆ ಸೇರಿದ ಜಮೀನನ್ನು ಬಿ.ಎಂ.ಎಸ್. ಮಹಿಳಾ ಕಾಲೇಜಿಗೆ ಗುತ್ತಿಗೆಗೆ ನೀಡಲಾಗಿದೆಯೇ?*

*ಆ) ಹಾಗಿದ್ದಲ್ಲಿ ಈ ಬಗ್ಗೆ ಸಚಿವ ಸಂಪುಟದ ತೀರ್ಮಾನವನ್ನು ಕೈಗೊಳ್ಳಲಾಗಿತ್ತೆ?*

*ಇ) ಸರ್ಕಾರವು ಬಿ.ಎಂ.ಎಸ್. ಮಹಿಳಾ ಕಾಲೇಜಿನ ಜಮೀನನ್ನು ವಿನಿಮಯ ಆಧಾರದೇ ಮೇರೆಗೆ ತೆಗೆದುಕೊಂಡ ನಂತರ ಸದರಿ ಸಂಸ್ಥೆಗೆ ವಿನಿಮಯದಿಂದ ಬಂದ ಜಮೀನನ್ನು ಗುತ್ತಿಗೆಗೆ ನೀಡಲಾಗಿದೆ ಎಂಬ ವಿಷಯವು ನಿಜವೇ?*

*ಈ) ಗುತ್ತಿಗೆ ಅವಧಿ?*

*ಉ) ಜಮೀನನ್ನು ಗುತ್ತಿಗೆಗೆ ನೀಡಲಾಗಿರುವ ಉದ್ದೇಶ*

*ಊ) ಗುತ್ತಿಗೆ ನೀಡಲಾಗಿರುವ ಜಮೀನಿನಲ್ಲಿ ಕೆಲವು ಅನಧಿಕೃತ ಕಟ್ಟಡಗಳ ನಿರ್ಮಾಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

*ಋ) ಸರ್ಕಾರವು ಈಗ ನೀಡಲಾಗಿರುವ ಗುತ್ತಿಗೆಯನ್ನು ರದ್ದುಗೊಳಿಸಿ ಸದರಿ ಜಮೀನನ್ನು ದೇವಾಲಯದ ಉಪಯೋಗಕ್ಕೆ ಮೀಸಲಿರಿಸುವ ದಿಸೆಯಲ್ಲಿ ಕ್ರಮವನ್ನು ಕೈಗೊಳ್ಳುವುದೇ?*

ಶ್ರೀ ಎಂ. ರಾಜಶೇಖರ ಮೂರ್ತಿ (ಕಂದಾಯ ಸಚಿವರು):

ಅ) ಹೌದು.

ಆ) ಇಲ್ಲ.

ಇ) ಹೌದು.

ಈ) 5 ವರ್ಷಗಳು

ಉ) ಬಿ.ಎಂ.ಎಸ್. ಟ್ರಸ್ಟ್‌ರವರು ವಿನಿಮಯ ಮಾಡಲಾಗಿರುವ ಜಮೀನಿನ ಆವರಣದಲ್ಲಿ ಕಾಲೇಜನ್ನು ನಡೆಸುತ್ತಿದ್ದು ದೇವಾಲಯದ ಜಮೀನು ಖಾಲಿ ಇದ್ದು ಸದರಿ ನಿವೇಶನದಲ್ಲಿ ಕಾಲೇಜಿನ ಕಟ್ಟಡ ಪೂರ್ಣ ಆಗುವವರೆಗೂ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸಕ್ಕೆ ತೊಂದರೆಯಾಗಬಾರದೆಂಬ ಉದ್ದೇಶದಿಂದ ಸದರಿ ಜಮೀನನ್ನು ಗುತ್ತಿಗೆಗೆ ನೀಡಲಾಗಿದೆ.

ಊ) ಇಲ್ಲ.

ಋ) ಪ್ರಶ್ನೆ ಉದ್ಭವಿಸುವುದಿಲ್ಲ.

**ಹಂಪಿ ಶ್ರೀ ವಿರೂಪಾಕ್ಷ ದೇವಸ್ಥಾನದಲ್ಲಿ ನಡೆದಿರುವ ಅವ್ಯವಹಾರ**

993 - ಶ್ರೀ ಸೋಮಪ್ಪ ಸುವರ್ಣ (ಮುಡಬಿದರೆ): ಮಾನ್ಯ ಕಂದಾಯ ಸಚಿವರು ದಯವಿಟ್ಟು ಈ ಕೆಳಕಂಡ ವಿಷಯಗಳನ್ನು ತಿಳಿಸುವರೆ?

ಅ) *ಹಂಪಿಯ ಶ್ರೀ ವಿರೂಪಾಕ್ಷಸ್ವಾಮಿ ದೇವಸ್ಥಾನವು ಮುಜರಾಯಿ ಇಲಾಖೆಗೆ ಸೇರಿರುವುದೆ?*

ಆ) *ಆ ದೇವಸ್ಥಾನದ ವಿಗ್ರಹಗಳ ಪುನರ್ ಪ್ರತಿಷ್ಠಾಪನೆ ನಡೆದಿರುವುದು ನಿಜವೇ?*

ಇ) *ಹಾಗಿದ್ದಲ್ಲಿ ಸರ್ಕಾರದ ಅನುಮತಿ ಪಡೆಯಲಾಗಿತ್ತೆ?*

ಈ) *ದೇವರ ವಿಗ್ರಹಗಳನ್ನು ಪುನರ್ ಪ್ರತಿಷ್ಠಾಪನೆ ಮಾಡುವ ಸಂದರ್ಭದಲ್ಲಿ ವಿಗ್ರಹಗಳ ಕೆಳಗೆ ಇದ್ದ ನಿಧಿ ಕಣ್ಮರೆಯಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿರುತ್ತದೆಯೇ?*

ಉ) *ಈ ಬಗ್ಗೆ ಸರ್ಕಾರವು ತಪ್ಪಿತಸ್ಥರ ಮೇಲೆ ಕ್ರಮ ಕೈಗೊಳ್ಳುವ ಬಗ್ಗೆ ಸಿ.ಐ.ಡಿ. ತನಿಖೆಯನ್ನು ಆರಂಭಿಸಲಾಗಿದೆಯೇ? ಹಾಗಿದ್ದ ಪಕ್ಷದಲ್ಲಿ ತನಿಖೆಯು ಯಾವ ಹಂತದಲ್ಲಿದೆ?*

ಊ)*ತನಿಖೆಯನ್ನು ಕೈಗೊಳ್ಳದಿದ್ದ ಪಕ್ಷದಲ್ಲಿ ಅದಕ್ಕೆ ಕಾರಣವೇನು?*

ಶ್ರೀ ಎಂ. ರಾಜಶೇಖರ ಮೂರ್ತಿ (ಕಂದಾಯ ಸಚಿವರು):

ಅ) ಹೌದು.

ಆ) ಹೌದು.

ಇ) ಇಲ್ಲ.

ಈ) ನಿಧಿ ಕಣ್ಮರೆಯಾದ ಬಗ್ಗೆ ತಕರಾರು ಅರ್ಜಿ ಹಾಗೂ ಪತ್ರಿಕಾ ವರದಿ ಬಂದಿರುತ್ತದೆ.

ಉ) ಈಗ ತಾನೇ ಸಿ.ಐ.ಡಿ. ತನಿಖೆಗೆ ಒಪ್ಪಿಸಲಾಗಿದೆ.

ಊ) ಪ್ರಶ್ನೆ ಉದ್ಭವಿಸುವುದಿಲ್ಲ.

**ಅತಿವೃಷ್ಟಿಯಿಂದ ಹಾನಿಯಾದ ಬೆಳೆಗೆ ಪರಿಹಾರ ಧನ**

355-ಶ್ರೀ ಬಿ.ಹೆಚ್. ಬನ್ನಿಕೋಡ್ (ಹಿರೇಕೆರೂರು): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?